## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಾನಸ ಕಾಲೇಜ್ ಆಫ್ ನರ್ಸಿಂಗ್, ಮಾಲೂರು ಈ ಸಂಸ್ಥೆಗೆ ಎಂ.ಎಸ್ಸಿ. ನರ್ಸಿಂಗ್ ಕೋರ್ಸ್‌ಗಳಿಗೆ ಸಂಯೋಜನೆ ನೀಡುವ ಬಗ್ಗೆ.

---***---

ಓದಲಾಗಿದೆ:

ಪತ್ರ ಸಂಖ್ಯೆ:ಎಸಿಎ/ಎನ್‌ಎಸ್-185/ಓ-155/2009-10, ದಿನಾಂಕ 03-07-2008.

ಪ್ರಸ್ತಾವನೆ:

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಮೇಲೆ ಓದಲಾದ ತಮ್ಮ ಪತ್ರದಲ್ಲಿ ಮಾನಸ ಕಾಲೇಜ್ ಆಫ್ ನರ್ಸಿಂಗ್, ಮಾಲೂರು ಈ ಸಂಸ್ಥೆಗೆ 2009-10ನೇ ಸಾಲಿನಿಂದ ಎಂ.ಎಸ್ಸಿ., ನರ್ಸಿಂಗ್ ಇನ್ ಮೆಡಿಕಲ್ ಸರ್ಜಿಕಲ್ ನರ್ಸಿಂಗ್ ಮತ್ತು ಪೀಡಿಯಾಟ್ರಿಕ್ ನರ್ಸಿಂಗ್ ಕೋರ್ಸುಗಳನ್ನು ತಲಾ 05 (ಐದು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಗಾಗಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 1994ರ ಕಲಂ 45(2)ರಡಿ ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿಯನ್ನು ಆಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ನಿರ್ಣಯವನ್ನು ಸಲ್ಲಿಸುತ್ತ ಸಂಯೋಜನೆ ನೀಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಮಾನಸ ಕಾಲೇಜ್ ಆಫ್ ನರ್ಸಿಂಗ್, ಮಾಲೂರು ಈ ಸಂಸ್ಥೆಗೆ 2009-10ನೇ ಸಾಲಿನಿಂದ ಎಂ.ಎಸ್ಸಿ., ನರ್ಸಿಂಗ್ ಇನ್ ಮೆಡಿಕಲ್ ಸರ್ಜಿಕಲ್ ನರ್ಸಿಂಗ್ ಮತ್ತು ಪೀಡಿಯಾಟ್ರಿಕ್ ನರ್ಸಿಂಗ್ ಕೋರ್ಸುಗಳನ್ನು ತಲಾ 05 (ಐದು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಆಕುಕ 286 ಎಂಪಿಎಸ್ 2008, ಬೆಂಗಳೂರು, ದಿನಾಂಕ 26-11-2008

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 1994ರ ಕಲಂ 45(5)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **ಮಾನಸ ಕಾಲೇಜ್ ಆಫ್ ನರ್ಸಿಂಗ್, ಮಾಲೂರು ಈ ಸಂಸ್ಥೆಗೆ** 2009-10ನೇ ಸಾಲಿನಿಂದ ಎಂ.ಎಸ್ಸಿ., **ನರ್ಸಿಂಗ್ ಇನ್ ಮೆಡಿಕಲ್ ಸರ್ಜಿಕಲ್ ನರ್ಸಿಂಗ್ ಮತ್ತು ಪೀಡಿಯಾಟ್ರಿಕ್ ನರ್ಸಿಂಗ್ ಕೋರ್ಸುಗಳನ್ನು** ತಲಾ 05 (ಐದು) **ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು** ಈ ಕೆಳಕಂಡ ಷರತ್ತುಗಳು ಮತ್ತು ನಿಬಂಧನೆಗಳಿಗೆಗೊಳಪಟ್ಟು ಸಂಯೋಜನೆ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

### ಷರತ್ತುಗಳು ಮತ್ತು ನಿಬಂಧನೆಗಳು

(1) ಮಾನಸ ಕಾಲೇಜ್ ಆಫ್ ನರ್ಸಿಂಗ್, ಮಾಲೂರು ಇದು ಶೇ.20ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.

(2) ಮೇಲ್ಕಂಡ ಕೋರ್ಸ್‌ಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.

(3) 1947ರ ಭಾರತೀಯ ನರ್ಸಿಂಗ್ ಕೌನ್ಸಿಲ್ ಅಧಿನಿಯಮದ 13ನೇ ಪ್ರಕರಣದಲ್ಲಿ ಭಾರತೀಯ ಶುಶ್ರೂಷಾ ಪರಿಷತ್ತಿನ ಅನುಮೋದನೆಯನ್ನು ಪಡೆಯತಕ್ಕದ್ದು ಮತ್ತು ಭಾರತೀಯ ನರ್ಸಿಂಗ್ ಪರಿಷತ್ತು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ಭಾರತೀಯ ಶುಶ್ರೂಷ ಪರಿಷತ್ತು ನಿಗದಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಹೊಂದತಕ್ಕದ್ದು.

(4) ಭಾರತೀಯ ಶುಶ್ರೂಷಾ ಪರಿಷತ್ತಿನ ಅನುಮೋದನೆಯನ್ನು 1947ರ ಭಾರತೀಯ ನರ್ಸಿಂಗ್ ಕೌನ್ಸಿಲ್ ಅಧಿನಿಯಮದ 13ನೇ ಪ್ರಕರಣದಡಿ ಪಡೆದ ನಂತರವೇ ನಿಗದಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

(5) ಭಾರತೀಯ ಶುಶೂಷಾ ಪರಿಷತ್ತು, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ರಾಜ್ಯ ಸರ್ಕಾರ ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

(6) ಭಾರತೀಯ ಶುಶ್ರೂಷಾ ಪರಿಷತ್ತಿನ ಮಾರ್ಗಸೂಚಿ ಪ್ರಕಾರ ಸ್ವಂತ ಆಸ್ಪತ್ರೆಯನ್ನು 5 ವರ್ಷಗಳ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

(7) ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಸಿಯೋಥೆರಫಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಎಂ.ಎಸ್ಸಿ. ನರ್ಸಿಂಗ್, ಎಂ.ಪಿ.ಟಿ. ಮತ್ತು ಎಂ.ಫಾರ್ಮ ಕೋರ್ಸುಗಳ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.

(8) ಮೇಲ್ಕಂಡ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಕಾಲೇಜಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.

(9) ಮೇಲ್ಕಂಡ ಯಾವುದೇ ಷರತ್ತುನ್ನು ಕಾಲೇಜು ಉಲ್ಲಂಘಿಸಿದ್ದಲ್ಲಿ 1994ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48ನೇ ಪ್ರಕರಣದಡಿ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ವಿ. [signature] 24/11/2008
(ವಿ. ಶ್ರೀರಾಮರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ವೈದ್ಯಕೀಯ ಶಿಕ್ಷಣ)

[initials] 24/11/08

ಇವರಿಗೆ:

1) ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4ನೇ ಟಿ ಬ್ಲಾಕ್, ಬೆಂಗಳೂರು-41.
2) ರಿಜಿಸ್ಟ್ರಾರ್, ಭಾರತೀಯ ಶುಶ್ರೂಷಾ ಪರಿಷತ್ತು, ಕೋಟ್ಲಾ ರಸ್ತೆ, ನವದೆಹಲಿ-110001.
3) ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತು, ಬೆಂಗಳೂರು-560 009.
4) ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-09.
5) ಪ್ರಾಂಶುಪಾಲರು, ಮಾನಸ ಕಾಲೇಜ್ ಆಫ್ ನರ್ಸಿಂಗ್, ಮಾಲೂರು-ಹೊಸೂರು ರಸ್ತೆ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹತ್ತಿರ, ಮಾಲೂರು-563130.
6) ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ವಿಧಾನಸೌಧ.
8) ಸರ್ಕಾರದ ಅಪರ ಕಾರ್ಯದರ್ಶಿರವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.